# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಸಂತಾಪ

ಪತ್ರಿಕೆಯ ಹೆಸರು : NAME OF THE NEWS PAPER : ವಿಜಯ ಕರ್ನಾಟಕ    ದಿನಾಂಕ : DATE : 03/11/2019

# ಮಾಜಿ ಸಚಿವ ವೈಜನಾಥ ಪಾಟೀಲ್ ನಿಧನ

**ಕಲಬುರಗಿ:** ಮಾಜಿ ಸಚಿವ, 371ಜೆ ಕಲಂ ಹೋರಾಟಗಾರ ವೈಜನಾಥ ಪಾಟೀಲ್ (82) ಶನಿವಾರ ಬೆಂಗಳೂರಿನಲ್ಲಿ



ಖಾಸಗಿ ಆಸ್ಪತ್ರೆಯಲ್ಲಿ ಶನಿವಾರ ಬೆಳಗಿನಜಾವ ನಿಧನರಾದರು.

ಅನಾರೋಗ್ಯದಿಂದ ಬಳಲುತ್ತಿದ್ದರು. ಚಿಕಿತ್ಸೆ ಫಲಕಾರಿಯಾಗಲಿಲ್ಲ. ಪತ್ನಿ, ಡಾ. ವಿಕ್ರಮ್ ಪಾಟೀಲ್, ಗೌತಮ ಪಾಟೀಲ್ ಸೇರಿದಂತೆ ಮೂವರು ಪುತ್ರರು, ಇಬ್ಬರು ಪುತ್ರಿಯರು ಇದ್ದಾರೆ.

ಭಾನುವಾರ ಮಧ್ಯಾಹ್ನ 3 ಗಂಟೆಗೆ ಚಿಂಚೋಳಿ ಪಟ್ಟಣದ ಗಂಗಮ್ಮ ಭೀಮಸೆಟ್ಟಿ ಕಲ್ಯಾಣ ಮಂಟಪದ ಆವರಣದಲ್ಲಿ ಅಂತ್ಯಕ್ರಿಯೆ ಜರುಗಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ. ರಾಮಕೃಷ್ಣ ಹೆಗಡೆ ಸಂಪುಟದಲ್ಲಿ 1984ರಲ್ಲಿ ತೋಟಗಾರಿಕೆ, ಎಚ್. ಡಿ. ದೇವೇಗೌಡ ಸಂಪುಟದಲ್ಲಿ 1994ರಲ್ಲಿ ನಗರಾಭಿವೃದ್ಧಿ ಸಚಿವರಾಗಿದ್ದರು. ಹೈದರಾಬಾದ್ ಕರ್ನಾಟಕಕ್ಕೆ ವಿಶೇಷ ಸ್ಥಾನಮಾನಕ್ಕಾಗಿ 2 ದಶಕದ ಹಿಂದೆಯೇ ಧ್ವನಿ ಎತ್ತಿದ್ದರು. ಹೈದರಾಬಾದ್ ಕರ್ನಾಟಕ ಹೋರಾಟ ಸಮಿತಿ ರಚಿಸಿಕೊಂಡು ಬೇಡಿಕೆಗಳ ಈಡೇರಿಕೆಗೆ ಹೋರಾಡಿದರು. ಬೇಡಿಕೆಗೆ ಸರಕಾರ ಸ್ಪಂದಿಸುತ್ತಿಲ್ಲ ಎಂದು ಪ್ರತಿಭಟಿಸಿ 1984ರಲ್ಲಿ ಸಚಿವ ಸ್ಥಾನಕ್ಕೆ

## ಮುಖ್ಯಮಂತ್ರಿಯಿಂದ ಅಂತಿಮ ನಮನ

**ಬೆಂಗಳೂರು:** ಮಾಜಿ ಸಚಿವ ವೈಜನಾಥ ಪಾಟೀಲ್ ಅವರಿಗೆ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಹಾಗೂ ಮಾಜಿ ಸಿಎಂ ಸಿದ್ದರಾಮಯ್ಯ ಅವರು ಅಂತಿಮ ನಮನ ಸಲ್ಲಿಸಿದರು.



ಕಲ್ಯಾಣ ಕರ್ನಾಟಕದ ಶ್ರೇಯೋಭಿವೃದ್ಧಿಗಾಗಿ ಜೀವನವನ್ನೇ ಮುಡಿಪಾಗಿಟ್ಟ ವೈಜನಾಥ್ ಪಾಟೀಲ್ ನಿಧನ ತೀವ್ರ ದುಃಖ ತಂದಿದೆ. ವಿಶೇಷ ಸ್ಥಾನಮಾನ ದೊರಕಿಸುವ ನಿಟ್ಟಿನಲ್ಲಿ ಅವರ ಪಾತ್ರ ಪ್ರಮುಖವಾಗಿತ್ತು. ನೇರ ನಡೆ ನುಡಿಯ ಹೋರಾಟಗಾರ.

– ಬಿ.ಎಸ್. ಯಡಿಯೂರಪ್ಪ, ಸಿಎಂ

ರಾಜೀನಾಮೆ ನೀಡಿ ಗಮನ ಸೆಳೆದಿದ್ದರು. 5 ದಶಕಗಳ ರಾಜಕೀಯ ಜೀವನದಲ್ಲಿ ಸಿದ್ಧಾಂತ, ಲೋಹಿಯಾವಾದ, ಸಮಾಜವಾದಿ ಚಿಂತನೆಗಳಿಂದ ಇವತ್ತಿಗೂ ಜನಮಾನಸದಲ್ಲಿ ಉಳಿದಿದ್ದಾರೆ.

ಪಾಟೀಲರು ಒಮ್ಮೆ ವಿಧಾನ ಪರಿಷತ್ (1984) ಮತ್ತು ಎರಡು ಬಾರಿ ವಿಧಾನಸಭೆಗೆ (1994 ಮತ್ತು 2004) ಚಿಂಚೋಳಿಯಿಂದ ಜಯಗಳಿಸಿದ್ದಾರೆ. 5 ಬಾರಿ ವಿಧಾನಸಭೆಗೆ, 2 ಬಾರಿ ಲೋಕಸಭೆಗೆ, ಒಮ್ಮೆ ವಿಧಾನ ಪರಿಷತ್‌ಗೆ ಸ್ಪರ್ಧಿಸಿ ಸೋತಿದ್ದರು.

4